**ದಕ್ಷಿಣ ಕನ್ನಡ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟ ನಿಯಮಿತ.,**
**ಮಂಗಳೂರು ಡೈರಿ ಆವರಣ, ಕುಲಶೇಖರ, ಮಂಗಳೂರು –575 005**
**ದೂರವಾಣಿ ಸಂಖ್ಯೆ: (0824) 2231515, 2230986 ಫ್ಯಾಕ್ಸ್ :2230029**
**Email : mddkmul@gmail.com**

**ನಂ:ದಕಹಾಒ:ಆಡಳಿತ:10119 :2016–17 ದಿನಾಂಕ: 20–03–2017**

# :ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಪ್ರಕಟಣೆ:

ದಕ್ಷಿಣ ಕನ್ನಡ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟವು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಗ್ರಾಮೀಣ ಪ್ರದೇಶದಿಂದ ಹಾಲನ್ನು ಸಂಗ್ರಹಿಸಿ, ಸಂಸ್ಕರಣೆ/ ವಿವಿಧ ಉತ್ಪನ್ನಗಳ ತಯಾರಿಕೆ ಮಾಡಿ ಉತ್ತಮ ಗುಣಮಟ್ಟದ ಪಾಶ್ಚರೀಕರಿಸಿದ **'ನಂದಿನಿ'** ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಗ್ರಾಹಕರಿಗೆ ಒದಗಿಸುವ ಸಹಕಾರಿ ಸಂಸ್ಥೆಯಾಗಿರುತ್ತದೆ. ನಮ್ಮ ಕಾರ್ಯಾಚರಣೆಯನ್ನು ಬಲಪಡಿಸಲು **ಈ ಕೆಳಗೆ ನಮೂದಿಸಿದ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.** ಹುದ್ದೆಗಳು, ವೇತನಶ್ರೇಣಿ,ಹುದ್ದೆಗಳ ಸಂಖ್ಯೆ, ವಿದ್ಯಾರ್ಹತೆ ಮತ್ತು ಹುದ್ದೆಗಳ ಮೀಸಲಾತಿ ವರ್ಗೀಕರಣ ಇತ್ಯಾದಿ ವಿವರಗಳನ್ನು ಈ ಕೆಳಗೆ ನಮೂದಿಸಿದೆ.

## 1) ಸಹಾಯಕ ವ್ಯವಸ್ಥಾಪಕರು(ಎ.ಹೆಚ್./ಎ.ಐ.)/ Assistant Manager (AH/AI), ವೇತನಶ್ರೇಣಿ: ರೂ.28100–50100–ಮೂರು ಹುದ್ದೆಗಳು

| | ಇತರೆ | ಗ್ರಾಮೀಣ | ಮಹಿಳೆ |
|---|---|---|---|
| ಪರಿಶಿಷ್ಟ ಜಾತಿ | 1 | 1 | – |
| ಪರಿಶಿಷ್ಟ ಪಂಗಡ | – | – | 1 |

**ವಿದ್ಯಾರ್ಹತೆ:** ಪಶು ವೈದ್ಯಕೀಯ ವಿಜ್ಞಾನದಲ್ಲಿ **B.V.Sc.ಅಥವಾ B.V.Sc. &A.H** ಪದವೀಧರರಾಗಿರಬೇಕು. ಪಶು ವೈದ್ಯಕೀಯ ವಿಜ್ಞಾನದಲ್ಲಿ ಸ್ನಾತಕೋತ್ತರ ಪದವಿ M.V.Sc. ಪಡೆದವರಿಗೆ ಆದ್ಯತೆ ನೀಡಲಾಗುವುದು.

## 2) ಮಾರುಕಟ್ಟೆ ಅಧಿಕಾರಿ/ Marketing Officer, ವೇತನಶ್ರೇಣಿ:ರೂ.22800–43200–ಒಂದು ಹುದ್ದೆ

| | ಇತರೆ |
|---|---|
| ಪರಿಶಿಷ್ಟ ಪಂಗಡ | 1 |

**ವಿದ್ಯಾರ್ಹತೆ** : ಯಾವುದೇ ಪದವಿಯಲ್ಲಿ ತೇರ್ಗಡೆಯಾಗಿರಬೇಕು. ಅದರೊಂದಿಗೆ ಮಾರ್ಕೆಟಿಂಗ್ ವಿಷಯದಲ್ಲಿ ಎರಡು ವರ್ಷಗಳ M.B.A ಸ್ನಾತಕೋತ್ತರ ಪದವಿಯ ವಿದ್ಯಾರ್ಹತೆಯನ್ನು ಹೊಂದಿರಬೇಕು. ಡಿಪ್ಲೋಮಾ ಇನ್ ಕೋ–ಆಪರೇಟಿವ್ ಬಿಸಿನೆಸ್ ಮ್ಯಾನೇಜ್‌ಮೆಂಟ್ (DCBM) ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ಖುದ್ದಾಗಿ ತರಗತಿಗಳಿಗೆ ಹಾಜರಾಗಿ Marketing specialization ನಲ್ಲಿ ಎರಡು ವರ್ಷಗಳ ಪೂರ್ಣಾವಧಿಯ M.B.A ಸ್ನಾತಕೋತ್ತರ ಪದವಿಯಲ್ಲಿ ತೇರ್ಗಡೆಯಾಗಿರಬೇಕು. ಅಭ್ಯರ್ಥಿಯು ಖುದ್ದಾಗಿತರಗತಿಗಳಿಗೆ ಹಾಜರಾಗಿ Marketing specialization ನಲ್ಲಿ ಎರಡು ವರ್ಷಗಳ ಪೂರ್ಣಾವಧಿಯ M.B.A ಸ್ನಾತಕೋತ್ತರ ಪದವಿತೇರ್ಗಡೆಯಾಗಿರುವ ಬಗ್ಗೆ ಸ್ವಘೋಷಿತ ಪತ್ರವನ್ನುಅರ್ಜಿಯೊಂದಿಗೆ ಸಲ್ಲಿಸಬೇಕು ಮತ್ತು ಆಯ್ಕೆಯ ಸಮಯದಲ್ಲಿ ಈ ಬಗ್ಗೆ ವಿಶ್ವವಿದ್ಯಾನಿಲಯದಿಂದ ಅಗತ್ಯ ದಾಖಲಾತಿ ಸಲ್ಲಿಸಬೇಕು.

(Marketing & Finance,Marketing &H.R., ಇತ್ಯಾದಿ ಎರಡು ವಿಭಾಗಗಳ (Dual specialization) M.B.A. ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ. ತರಗತಿಗಳಿಗೆ ಹಾಜರಾಗದೆ ಮುಕ್ತ

ವಿಶ್ವವಿದ್ಯಾನಿಲಯಗಳಿಂದ/ದೂರಶಿಕ್ಷಣದ ಮೂಲಕ (Correspondance/ Distance Mode) ಪಡೆದ M.B.A ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ.)

**3)ಡೇರಿ ಸೂಪರ್‌ವೈಸರ್ ದರ್ಜೆ-II / Dairy Supervisor Gr.II,**
**ವೇತನಶ್ರೇಣಿ: ರೂ.17650-32000 -ಎರಡು ಹುದ್ದೆಗಳು**

| | ಮಹಿಳೆ | ಗ್ರಾಮೀಣ |
|---|---|---|
| ಪರಿಶಿಷ್ಟ ಜಾತಿ | 1 (E&E) | 1 (Civil) |

**ವಿದ್ಯಾರ್ಹತೆ** : ಯಾವುದೇ ಅಂಗೀಕೃತ ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ಇಲೆಕ್ಟ್ರಿಕಲ್ ಮತ್ತು ಇಲೆಕ್ಟ್ರಾನಿಕ್ಸ್ ಅಥವಾ ಸಿವಿಲ್ ಇಂಜಿನಿಯರಿಂಗ್ ವಿಷಯಗಳಲ್ಲಿ ಡಿಪ್ಲೋಮಾ ತೇರ್ಗಡೆಯಾಗಿರಬೇಕು. ಸಹಕಾರಿ ಡೈರಿಯಲ್ಲಿ ಎರಡು ವರ್ಷಗಳ ಅನುಭವ ಹೊಂದಿರಬೇಕು.

**ಮುಕ್ತ ವಿಶ್ವವಿದ್ಯಾನಿಲಯಗಳ ಮೂಲಕ ಡಿಪ್ಲೋಮಾ ಇನ್ ಇಂಜಿನಿಯರಿಂಗ್ ಮಾಡಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.**

ಅರ್ಜಿಯನ್ನು ಭರ್ತಿ ಮಾಡುವ ಮುನ್ನ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಳ್ಳತಕ್ಕದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯಲ್ಲಿ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹವರ ವಿರುದ್ಧ ಒಕ್ಕೂಟವು ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳುವುದು.ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

**ಪ್ರಮುಖ ಸೂಚನೆಗಳು**

1. **ಸಾಮಾನ್ಯ ಷರತ್ತುಗಳು:**

**ಪದವಿ** ಎಂದರೆ ಅಭ್ಯರ್ಥಿಯು 10+2 ರ ವಿಧ್ಯಾಭ್ಯಾಸದ ನಂತರ ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾಗಿರುವ ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ನಿಯತವಾಗಿ ಪಡೆದ **ಕನಿಷ್ಟ ಮೂರು ವರ್ಷಗಳ ಅವಧಿಯ ಸಾಂಪ್ರದಾಯಿಕ ಪದವಿ (10+2+3).**

**ಸ್ನಾತಕೋತ್ತರ ಪದವಿ** ಎಂದರೆ (10+2+3) ರ ವಿದ್ಯಾಭ್ಯಾಸದ ನಂತರ ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾಗಿರುವ ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದಿಂದ ನಿಯತವಾಗಿ ಪಡೆದ **ಎರಡು ವರ್ಷಗಳ ಅವಧಿಯ ಸ್ನಾತಕೋತ್ತರ ಪದವಿ (10+2+3+2).**

**ಸೂಚನೆ:-**ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಮೇಲಿನ ನಿಗದಿತ ವಿದ್ಯಾರ್ಹತೆಯ ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ. ಆಯಾ ವಿಶ್ವವಿದ್ಯಾನಿಲಯಗಳಿಂದ ಪಡೆದ ಘಟಿಕೋತ್ಸವ ಪ್ರಮಾಣಪತ್ರವನ್ನು (Convocation Certificate) ಅರ್ಜಿಯೊಂದಿಗೆಕಡ್ಡಾಯವಾಗಿ ಲಗತ್ತಿಸಬೇಕು. ವಿಶ್ವವಿದ್ಯಾನಿಲಯಗಳಲ್ಲಿ ಘಟಿಕೋತ್ಸವ ನಡೆಯದೇ ಇದ್ದ ಪಕ್ಷದಲ್ಲಿ ತಾತ್ಕಾಲಿಕ ಪ್ರಮಾಣಪತ್ರವನ್ನು (Provisional Degree/ Diploma Certificate) ಪಡೆದು ಕಡ್ಡಾಯವಾಗಿ ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ವಿಶ್ವವಿದ್ಯಾನಿಲಯಗಳಲ್ಲಿ ಘಟಿಕೋತ್ಸವ ನಡೆದಿದ್ದು, ಘಟಿಕೋತ್ಸವ ಪ್ರಮಾಣಪತ್ರ ಪಡೆಯದಿದ್ದರೆ ತಾತ್ಕಾಲಿಕ ಪ್ರಮಾಣಪತ್ರವನ್ನು ಪರಿಗಣಿಸಲಾಗುವುದಿಲ್ಲ. ತಾತ್ಕಾಲಿಕ ಪ್ರಮಾಣಪತ್ರವು ಘಟಿಕೋತ್ಸವ ನಡೆಯುವವರೆಗೆ ಮಾತ್ರ ಊರ್ಜಿತದಲ್ಲಿರುತ್ತದೆ. ಆಯಾ ಕಾಲೇಜುಗಳಿಂದ ನೀಡುವ ಘಟಿಕೋತ್ಸವ ಪ್ರಮಾಣಪತ್ರವನ್ನು ಪರಿಗಣಿಸಲಾಗುವುದಿಲ್ಲ. ತಾತ್ಕಾಲಿಕ ಪ್ರಮಾಣಪತ್ರವನ್ನು ಸಲ್ಲಿಸುವ ಅಭ್ಯರ್ಥಿಗಳು ಆಯಾ ಕಾಲೇಜುಗಳಿಂದ ಅಥವಾ ವಿಶ್ವವಿದ್ಯಾನಿಲಯಗಳಿಂದ ಘಟಿಕೋತ್ಸವ ನಡೆದಿರುವುದಿಲ್ಲವೆಂಬ ಬಗ್ಗೆ ದೃಢೀಕರಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು. ಇಲ್ಲದಿದ್ದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

ಕನ್ನಡ ಭಾಷಾ ಜ್ಞಾನ (ಓದುವುದು ಮತ್ತು ಬರೆಯುವುದು) ಕಡ್ಡಾಯವಾಗಿರುತ್ತದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡವರ್ಗಗಳ ಅರ್ಹ ಮಹಿಳಾ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ರಿಕ್ತ ಸ್ಥಾನಗಳನ್ನು ಆಯಾ ವರ್ಗಕ್ಕೆ ಸೇರಿದ ಅರ್ಹ ಪುರುಷ ಅಭ್ಯರ್ಥಿಗಳಿಂದ ಹಾಗೂ ಪರಿಶಿಷ್ಟ ಜಾತಿ –ಗ್ರಾಮೀಣ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ರಿಕ್ತ ಸ್ಥಾನಗಳನ್ನು ಇತರ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಮೂಲವೇತನದೊಂದಿಗೆ ಒಕ್ಕೂಟದ ಸೇವಾ ನಿಯಮಗಳಲ್ಲಿ ಕಾಲಕಾಲಕ್ಕೆ ಲಭ್ಯವಿರುವ ತುಟ್ಟಿಭತ್ಯೆ, ಮನೆ ಬಾಡಿಗೆ ಭತ್ಯೆ ಮತ್ತು ಇತರ ಭತ್ಯೆಗಳನ್ನು ಪಾವತಿಸಲಾಗುವುದು. ಭವಿಷ್ಯನಿಧಿ/ಗ್ರಾಚ್ಯುಟಿ ಇತ್ಯಾದಿ ಶಾಸನಬದ್ಧ ಸೌಲಭ್ಯಗಳನ್ನು ನೀಡಲಾಗುವುದು.

ಸಹಾಯಕ ವ್ಯವಸ್ಥಾಪಕರು (ಎ.ಹೆಚ್./ಎ.ಐ.)ಮತ್ತುಮಾರುಕಟ್ಟೆ ಅಧಿಕಾರಿ ಹುದ್ದೆಗಳಿಗೆ ನೇಮಕಗೊಳ್ಳುವ ಅಭ್ಯರ್ಥಿಗಳು ಗ್ರಾಮೀಣ ಪ್ರದೇಶದಲ್ಲಿ ವ್ಯಾಪಕ ಪ್ರವಾಸವನ್ನು ಕೈಗೊಳ್ಳುವುದು ಕಡ್ಡಾಯವಾಗಿರುತ್ತದೆ. ಡೈರಿ ಸೂಪರ್‌ವೈಸರ್ ದರ್ಜೆ–IIಹುದ್ದೆಗಳಿಗೆ ನೇಮಕಗೊಳ್ಳುವ ಅಭ್ಯರ್ಥಿಗಳು ಕಾನೂನು ರೀತ್ಯಾ ಪಾಳಿಗಳಲ್ಲಿ ಕರ್ತವ್ಯ ನಿರ್ವಹಿಸುವುದು ಕಡ್ಡಾಯವಾಗಿರುತ್ತದೆ.

ಡೇರಿ ಸೂಪರ್‌ವೈಸರ್ ದರ್ಜೆ–II ಹುದ್ದೆಗಳಿಗೆ ಸಹಕಾರಿ ಡೈರಿಯಲ್ಲಿ ಎರಡು ವರ್ಷಗಳ ಅನುಭವ ಹೊಂದಿರುವ ಬಗ್ಗೆ ಈ ಅರ್ಜಿಯೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿಯೇ ಅನುಭವ ಪ್ರಮಾಣಪತ್ರ ಪಡೆದು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಇತರ ನಮೂನೆ/ ಪತ್ರದ ಮುಖಾಂತರ ಅನುಭವದ ಬಗ್ಗೆ ದೃಢೀಕರಣ ಮಾಡಿ ಸಲ್ಲಿಸಿದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಸಹಕಾರಿ ಡೈರಿ ಅಂದರೆ ಹಾಲು ಉತ್ಪಾದಕರ ಒಕ್ಕೂಟಗಳ ಡೈರಿಗಳಲ್ಲಿ ಸೇವೆ ಸಲ್ಲಿಸಿದ ಅನುಭವವನ್ನು ಮಾತ್ರ ಪರಿಗಣಿಸಲಾಗುವುದು. ಶೀಥಲೀಕರಣ ಕೇಂದ್ರ, ಶಿಬಿರ ಕಛೇರಿ, ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರಿ ಸಂಘಗಳು, ಬಲ್ಕ್ ಮಿಲ್ಕ್ ಕೂಲರ್‌ಗಳು, ಪಶು ಆಹಾರ ಘಟಕಗಳು ಅಥವಾ ಇತರ ಖಾಸಗಿ ಡೈರಿ/ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸಿದ ಅನುಭವವನ್ನು ಪರಿಗಣಿಸಲಾಗುವುದಿಲ್ಲ.

**2. ವಯೋಮಿತಿ:**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಕನಿಷ್ಟ ವಯೋಮಿತಿ – 18 ವರ್ಷಗಳು ಮತ್ತು ಗರಿಷ್ಟ ವಯೋಮಿತಿ: – 40 ವರ್ಷಗಳು.

ಅಗತ್ಯ ಪುರಾವೆಯನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು. ಇಲ್ಲದಿದ್ದಲ್ಲಿ ಅರ್ಜಿಯನ್ನು ಪರಿಗಣಿಸಲಾಗುದಿಲ್ಲ.

**ವಯೋಮಿತಿ ಸಡಿಲಿಕೆ:** ಅಂಗವಿಕಲರಿಗೆ ಮತ್ತು ವಿಧವೆಯರಿಗೆ ವಯೋಮಿತಿಯಲ್ಲಿ ಗರಿಷ್ಟ 10 ವರ್ಷಗಳ ಸಡಿಲಿಕೆಇರುತ್ತದೆ.ಅಂಗವೈಕಲ್ಯವನ್ನು ಹೊಂದಿರುವ ಬಗ್ಗೆ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. ವಿಧವೆಯಾಗಿದ್ದಲ್ಲಿ, ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರುಮದುವೆಯಾಗಿ ರುವುದಿಲ್ಲವೆಂದು ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಭಾರತೀಯ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳು ಮತ್ತು ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ. ವಯೋಮಿತಿ ಸಡಿಲಿಕೆಯ ವಿನಾಯಿತಿ/ ರಿಯಾಯಿತಿ ಸೌಲಭ್ಯ ಪಡೆಯಲಿಚ್ಛಿಸುವವರು ಈ ಬಗ್ಗೆ ಅಗತ್ಯ ಪ್ರಮಾಣ ಪತ್ರ: ದಾಖಲೆ ಸಲ್ಲಿಸಬೇಕು.

**3. ಅರ್ಹತಾ ಷರತ್ತುಗಳು:**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಗಳು ಮಾನಸಿಕವಾಗಿ ಮತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಒಕ್ಕೂಟವು ಕಾಯ್ದಿರಿಸಿಕೊಂಡಿದೆ.

**4. ಆಯ್ಕೆ ವಿಧಾನ:**

ಅಭ್ಯರ್ಥಿಗಳು ಯಾವುದೇ ಶುಲ್ಕವನ್ನು ಪಾವತಿಸುವಂತಿಲ್ಲ. ಬ್ಯಾಕ್‌ಲಾಗ್ ಹುದ್ದೆಗಳನ್ನು ಕರ್ನಾಟಕ ರಾಜ್ಯ ನಾಗರಿಕ ಸೇವೆಗಳು (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ವ್ಯಕ್ತಿಗಳಿಗೆ ಮೀಸಲಿರಿಸಿದತುಂಬದೇ ಇರುವ ಸ್ಥಾನಗಳು) (ವಿಶೇಷ ನೇಮಕಾತಿ) ನಿಯಮಗಳು 2001 ಮತ್ತು ದಿನಾಂಕ 01–06–2002 ರ ಪ್ರಕಟಣೆಯಲ್ಲಿ ತಿದ್ದುಪಡಿಯಾದ ನಿಯಮಗಳ ಅವಕಾಶಗಳ ರೀತ್ಯಾ ಅರ್ಹತಾ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಗಳಿಸಿದ ಒಟ್ಟು ಅಂಕಗಳ ಶೇಕಡವಾರನ್ನು ಆಧರಿಸಿ 18 ವರ್ಷದಿಂದ 28 ವರ್ಷ ವಯೋಮಿತಿಯುಳ್ಳ 29 ವರ್ಷದೊಳಗಿನ ಅಭ್ಯರ್ಥಿಗಳ ಒಂದು ಜ್ಯೇಷ್ಠತಾ ಪಟ್ಟಿಯನ್ನು ಹಾಗೂ 29 ವರ್ಷದಿಂದ 40 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳ ಇನ್ನೊಂದು ಜ್ಯೇಷ್ಠತಾ ಪಟ್ಟಿಯನ್ನು ಮಾಡಲಾಗುವುದು.29 ವರ್ಷದಿಂದ 40 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳಜ್ಯೇಷ್ಠತಾ ಪಟ್ಟಿಯಲ್ಲಿರುವವರಿಗೆಮೊದಲ ಆದ್ಯತೆ ನೀಡಲಾಗುವುದು. ಅಭ್ಯರ್ಥಿಗಳು ಅರ್ಜಿಯಲ್ಲಿ ಅರ್ಹತಾ ಪರೀಕ್ಷೆಯಲ್ಲಿಗಳಿಸಿದ ಒಟ್ಟು ಶೇಕಡವಾರು ಅಂಕಗಳನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು.

**5 ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣಪತ್ರಗಳು:–**

**i. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು:**

ಪರಿಶಿಷ್ಟ ಜಾತಿಗೆ ಸೇರಿದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ನಮೂನೆಯಲ್ಲಿ ಅಂದರೆ ನಮೂನೆ 'ಡಿ' ಯಲ್ಲಿ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಸೀಲ್ದಾರ್‌ರವರಿಂದ ಅಂದರೆ ತಹಶೀಲ್ದಾರ್‌ರವರ ಸಹಿ ಮತ್ತು ಮೊಹರು ಅಥವಾ ಬಾರ್ ಕೋಡ್, ಹಾಲೋಗ್ರಾಮ್ ಮತ್ತು ವಾಟರ್‌ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಪರಿಶಿಷ್ಟ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು.

ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಒಕ್ಕೂಟವು ಸೂಚಿಸಿದಾಗ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಪರಿಗಣಿಸಲಾಗುವುದಿಲ್ಲ. ಈ ಪ್ರಮಾಣ ಪತ್ರಗಳ ನಮೂನೆಯನ್ನು ಕೊನೆಯಲ್ಲಿ ನೀಡಲಾಗಿದೆ. ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣಪತ್ರಗಳನ್ನು ತಿರಸ್ಕರಿಸಲಾಗುವುದು.

**ii. ಗ್ರಾಮೀಣ ಅಭ್ಯರ್ಥಿ:**

ಸರ್ಕಾರಿ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ59 ಶಾಸನ 2000, ದಿನಾಂಕ 06–01–2001 ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಅಭ್ಯರ್ಥಿಗಳು ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು.

ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಪರಿಶಿಷ್ಟ ಜಾತಿಗೆ ಸೇರಿದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣಪತ್ರವನ್ನು ನಮೂನೆ–2ರಲ್ಲಿ ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ದಾಖಲೆಗಳ ಪರಿಶೀಲನೆಯ ಸಂದರ್ಭದಲ್ಲಿ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಅಭ್ಯರ್ಥಿಗಳ ನೇರ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಕೊನೆಯಲ್ಲಿ ನೀಡಲಾಗಿದೆ.)

**iii.ವಿದ್ಯಾರ್ಹತೆ:**

ಸಹಾಯಕ ವ್ಯವಸ್ಥಾಪಕರು (ಎಹೆಚ್ / ಎಐ) ಮತ್ತು ಮಾರುಕಟ್ಟೆ ಅಧಿಕಾರಿ ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪ್ರಮಾಣಪತ್ರಗಳೊಂದಿಗೆ ಸದರಿ ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಗೆ ಸಂಬಂಧಿಸದ ಎಲ್ಲಾ ವರ್ಷಗಳ/ ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಮತ್ತು ಘಟಿಕೋತ್ಸವ ಪ್ರಮಾಣಪತ್ರ/ ತಾತ್ಕಾಲಿಕ ಪ್ರಮಾಣಪತ್ರಇವುಗಳನ್ನುಕಡ್ಡಾಯವಾಗಿ ಸಲ್ಲಿಸತಕ್ಕದ್ದು. ಇದಲ್ಲದೆ, ಮಾರುಕಟ್ಟೆ ಅಧಿಕಾರಿ ಹುದ್ದೆಗೆ ಪದವಿಯ ಎಲ್ಲಾ ವರ್ಷಗಳ/ ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಮತ್ತು ಘಟಿಕೋತ್ಸವ ಪ್ರಮಾಣಪತ್ರ/ ತಾತ್ಕಾಲಿಕ ಪ್ರಮಾಣಪತ್ರಇವುಗಳನ್ನುಕಡ್ಡಾಯವಾಗಿ ಸಲ್ಲಿಸತಕ್ಕದ್ದು.ಇಲ್ಲದಿದ್ದಲ್ಲಿ ಅರ್ಜಿಯನ್ನು ಪರಿಗಣಿಸಲಾಗುದಿಲ್ಲ.

ಡೇರಿ ಸೂಪರ್‌ವೈಸರ್ ದರ್ಜೆ–II ಹುದ್ದೆಗಳಿಗೆ SSLC ಪ್ರಮಾಣಪತ್ರದೊಂದಿಗೆ ನಿಗದಿಪಡಿಸಲಾದವಿದ್ಯಾರ್ಹತೆಗೆ ಸಂಬಂಧಿಸಿದ ಎಲ್ಲಾ ವರ್ಷಗಳ/ ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಮತ್ತು ಘಟಿಕೋತ್ಸವ/ತಾತ್ಕಾಲಿಕಡಿಪ್ಲೋಮಾ ಪ್ರಮಾಣಪತ್ರ. ಇವುಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

**iv.ಸೇವೆಯಲ್ಲಿರುವ ಮತ್ತು ಅನುಮತಿ ಪಡೆದಿರುವ ಬಗ್ಗೆ ಪ್ರಮಾಣಪತ್ರ:**

ಈಗಾಗಲೇ ಸರ್ಕಾರಿ/ ಅರೆ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿರುವ ನಿಗಧಿತ ಅಂಕಣವನ್ನು ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿಸಲ್ಲಿಸಲು ಸಂಬಂಧಿತ ನೇಮಕಾತಿ ಪ್ರಾಧಿಕಾರದಿಂದ ಅನುಮತಿ ಪಡೆದಿರುವ ಬಗ್ಗೆ ನಿಗಧಿತ ನಮೂನೆಯಲ್ಲಿ ಪ್ರಮಾಣಪತ್ರವನ್ನು ಪಡೆದು ಸಲ್ಲಿಸಬೇಕು.

**v.** ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ಶಾಲೆಯ ವರ್ಗಾವಣೆ ಪ್ರಮಾಣ ಪತ್ರ / ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.(extract of cumulative record)

**vi.** ನಿಗದಿತ ನಮೂನೆಯ ಅರ್ಜಿಯಲ್ಲಿ ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ ಅಂಟಿಸಿ ಅರ್ಜಿಯ ಕೊನೆಯಲ್ಲಿ ಸಹಿಯನ್ನು ಮಾಡಬೇಕು.

**vii.**ಡೇರಿ ಸೂಪರ್‌ವೈಸರ್ ದರ್ಜೆ–II ಹುದ್ದೆಗಳಿಗೆ ನಿಗಧಿತ ನಮೂನೆಯಲ್ಲಿ ಸೇವಾನುಭವ ಪ್ರಮಾಣಪತ್ರಗಳು

**6. ಪರೀಕ್ಷಾರ್ಥ ಅವಧಿ:**

ಆಯ್ಕೆಗೊಂಡ ಅಭ್ಯರ್ಥಿಗಳನ್ನು ಪ್ರಾರಂಭದಲ್ಲಿ ಎರಡು ವರ್ಷಗಳ ಪರೀಕ್ಷಾರ್ಥ ಅವಧಿಗೆ ನೇಮಕಾತಿ ಮಾಡಲಾಗುವುದು. ಅವಶ್ಯವಿದ್ದಲ್ಲಿ ಪರೀಕ್ಷಾರ್ಥ ಅವಧಿಯನ್ನು ವಿಸ್ತರಿಸಲಾಗುವುದು. ಪರೀಕ್ಷಾರ್ಥ ಅವಧಿಯಲ್ಲಿ ಅಭ್ಯರ್ಥಿಗಳ ಸೇವೆ ತೃಪ್ತಿಕರವಾಗಿದ್ದಲ್ಲಿ ಮಾತ್ರ ಸೇವೆಯನ್ನು ಖಾಯಂಗೊಳಿಸಲಾಗುವುದು.

**7. ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಹೊಂದಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಕಂಡುಬಂದಲ್ಲಿ ಹಾಗೂ ಒಕ್ಕೂಟದಿಂದ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ ಒಕ್ಕೂಟವು ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಸಂದರ್ಶನಕ್ಕೆ ಆಹ್ವಾನಿಸಲ್ಪಡುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

**<u>8.ಅರ್ಜಿ ಸಲ್ಲಿಸುವ ವಿಧಾನ</u> :**

www.dkmul.comನಲ್ಲಿ ನೀಡಿರುವ ನಿಗದಿತ ಅರ್ಜಿ ನಮೂನೆಯಲ್ಲಿ ಕನ್ನಡ ಅಥವಾ ಆಂಗ್ಲ ಭಾಷೆಯಲ್ಲಿ ಸ್ಪಷ್ಟವಾಗಿ ಬರೆದು ಅಥವಾ ಬೆರಳಚ್ಚು/ಕಂಪ್ಯೂಟರ್ ಮುದ್ರಣ ಮಾಡಿಸಿ ಅಗತ್ಯವಿರುವ ಎಲ್ಲಾ ದಾಖಲೆಗಳ ಪ್ರತಿಗಳನ್ನು ಸ್ವತ: ದೃಢೀಕರಿಸಿ (self attested) ಅರ್ಜಿಯೊಂದಿಗೆ ಕಡ್ಡಾಯವಾಗಿ ಲಗತ್ತಿಸಿ **"ವ್ಯವಸ್ಥಾಪಕ ನಿರ್ದೇಶಕರು, ದಕ್ಷಿಣ ಕನ್ನಡ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟ ನಿಯಮಿತ, ಮಂಗಳೂರು ಡೇರಿ ಆವರಣ, ಕುಲಶೇಖರ, ಮಂಗಳೂರು – 575 005"** ವಿಳಾಸಕ್ಕೆ ದಿನಾಂಕ: 22.04.2017ರಂದು ಸಂಜೆ 5.30ಘಂಟೆಯೊಳಗೆ ಅಥವಾ ಅದಕ್ಕೂ ಮುಂಚಿತವಾಗಿ ತಲುಪುವಂತೆ ಅಂಚೆ : ಕೊರಿಯರ್ ಮೂಲಕ ಅಥವಾ ಖುದ್ದಾಗಿ ಕಳುಹಿಸತಕ್ಕದ್ದು. ಲಕೋಟೆಯ ಮೇಲೆ **"ಬ್ಯಾಕ್‌ಲಾಕ್ ಹುದ್ದೆಗಳ ನೇಮಕಾತಿ" ಎಂದು ಹಾಗೂ ಅರ್ಜಿ ಸಲ್ಲಿಸುವ ಹುದ್ದೆಯ ಹೆಸರನ್ನು** ನಮೂದಿಸಬೇಕು. ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸದ, ಸಂಪೂರ್ಣ ಮಾಹಿತಿ ಒಳಗೊಂಡಿರದ ಹಾಗೂ ಅಗತ್ಯ ಪ್ರಮಾಣಪತ್ರಗಳು/ ಭಾವಚಿತ್ರ/ ಸಹಿ ಮಾಡದೇ ಇರುವ ಅರ್ಜಿಗಳನ್ನು ಮತ್ತು ಕೊನೆಯ ದಿನಾಂಕ:22.04.2017 ರಂದು ಸಂಜೆ 5.30 ಘಂಟೆಯ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಸಹಿ:

**ವ್ಯವಸ್ಥಾಪಕ ನಿರ್ದೇಶಕರು.**